(ಇಂದು ದಿನಾಂಕ 02-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

(ಸಾಕ್ಷಿದಾರರು ಕೊಂಕಣಿ ಭಾಷೆ ಮಾತನಾಡುವವರಾಗಿದ್ದರಿಂದ ವಕೀಲರಾಗಿರುವ ಶ್ರೀ ವಿ.ಜಿ.ಎ. ವಕೀಲರನ್ನು ಕನ್ನಡ ಭಾಷೆಗೆ ಭಾಷಾಂತರ ಮಾಡಲು ನೇಮಿಸಿಕೊಳ್ಳಲಾಯಿತು.)

**ಮುಂದುವರಿದ ಮುಖ್ಯ ವಿಚಾರಣೆ - 1 ನೇ ಪ್ರತಿವಾದಿ ಪರ ಶ್ರೀ ಆರ್.ವಿ.ಬಿ. ವಕೀಲರಿಂದ-**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು, ಅದನ್ನು ಓದಿ ತಿಳಿದುಕೊಂಡು ನಂತರ ಅದಕ್ಕೆ ನಾನು ಸಹಿ ಹಾಕಿರುತ್ತೇನೆ.

ದಿನಾಂಕ 16-06-2022 ರಂದು ಆದಂತಹ ದಾನಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ.1 ಎಂದು, ದಿನಾಂಕ 22-05-1969 ರಂದು ಆದಂತಹ ಕ್ರಯಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ. 2 ಎಂದು, ದಿನಾಂಕ 30-12-1975 ರಂದು ಆದಂತಹ ಕ್ರಯಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ.3 ಎಂದು, 2 ನಮೂನೆ ನಂ.3 ನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ.4 ಮತ್ತು ನಿ.ಡಿ.5 ಎಂದು, ನನಗೆ ಸಂಬಂಧಪಟ್ಟಂತೆ ಫಿಸಿಕಲ್ ಫಿಟನೆಸ್ ಸರ್ಟಿಫಿಕೇಟನ್ನು ಹಾಜರುಪಡಿಸಿದ್ದು ಅದನ್ನು ನಿ.ಡಿ.6 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ವಾದಿ ಪರ ವಕೀಲರು ಹಾಜರಿದ್ದು ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಹಿರಿಯ ಸಿವಿಲ್ ಜಡ್ಜ, ಕಾರವಾರ